# ಸುರತ್ಕಲ್‌ನ ಎನ್‌ಐಟಿಕೆಯಲ್ಲಿ ಆಚರಣೆ



**ಸುರತ್ಕಲ್‌ನ ಎನ್‌ಐಟಿಕೆ ಕ್ಯಾಂಪಸ್‌ನಲ್ಲಿ ಅಂಬೇಡ್ಕರ್ ಜಯಂತಿ ಆಚರಿಸಲಾಯಿತು. ಪ್ರೊ.ನಂದನ್ ಪ್ರಭು, ಪ್ರೊ.ಬಿ.ರವಿ ಮತ್ತಿತರರಿದ್ದರು.**

**ಮಂಗಳೂರು:** ಸುರತ್ಕಲ್‌ನ ಎನ್‌ಐಟಿಕೆ ಕ್ಯಾಂಪಸ್‌ನಲ್ಲಿ ನಡೆದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಪಣಂಬೂರಿನ ಪೊಲೀಸ್ ಇನ್‌ಸ್ಪೆಕ್ಟರ್ ಮಹಮ್ಮದ್ ಸಲೀಂ ಅಬ್ಬಾಸ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಮಣಿಪಾಲದ ಮಾಹೆಯ ಟಿ.ಎ.ಪೈ ಮ್ಯಾನೇಜ್‌ಮೆಂಟ್ ಇನ್‌ಸ್ಟಿಟ್ಯೂಟ್‌ನ ಪ್ರೊ.ನಂದನ್ ಪ್ರಭು, ಎನ್‌ಐಟಿಕೆ ನಿರ್ದೇಶಕ ಪ್ರೊ.ಬಿ.ರವಿ ಮತ್ತು ಉಪನಿರ್ದೇಶಕ ಪ್ರೊ.ಸುಭಾಷ್ ಸಿ. ಯರಗಲ್ ಮುಂತಾದವರು ಡಾ.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಅಂಬೇಡ್ಕರ್ ಜಯಂತಿ ಪೂರ್ವಭಾವಿಯಾಗಿ ಪ್ರಬಂಧ ಬರವಣಿಗೆ, ಚಿತ್ರಕಲಾ ಮತ್ತು ಕವಿತೆ ಸ್ಪರ್ಧೆ ಏರ್ಪಡಿಸಲಾಗಿತ್ತು. ಪುಸ್ತಕ ಪ್ರದರ್ಶನ, ತಜ್ಞರಿಂದ ಭಾಷಣ, ಚರ್ಚೆ, ಗಿಡ ನೆಡುವಿಕೆ, ಸಮುದಾಯ ಸಂಪರ್ಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

Vijayavani, Date: 15/04/25, P, no - 02